ಜಿಲ್ಲಾ ಪುನರ್ವಿಂಗಡಣೆ

೧೪೬. ಶ್ರೀಮತಿ ಮನೋರಮಾ ಮಾಧ್ವರಾಜ್ (ಉಡುಪಿ).—ಮಾನ್ಯ ಕಂದಾಯ ಮತ್ತು ಯೋಜನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಆಯೋಗದ ವರದಿಯು ಸರ್ಕಾರದಲ್ಲಿ ಸ್ವೀಕೃತವಾಗಿದ್ದು, ಜಿಲ್ಲಾ ಮತ್ತು ತಾಲ್ಲೂಕುಗಳ ಪುನರ್ವಿಂಗಡಣೆಯನ್ನು ಯಾವಾಗ ಜಾರಿಗೆ ತರಲಾಗುವುದು ?

ಶ್ರೀ ಎಸ್.ಆರ್. ಬೊಮ್ಮಾಯಿ (ಕಂದಾಯ ಮತ್ತು ಯೋಜನಾ ಮಂತ್ರಿಗಳು).—

ಅ) ಶ್ರೀ ಟಿ.ಎಂ. ಹುಂಡೇಕರ್ ಮತ್ತು ಶ್ರೀ ಪಿ.ಸಿ. ಗದ್ದಿಗೌಡರ್‌ರವರ ನೇತೃತ್ವದ ಜಿಲ್ಲೆಗಳು ಮತ್ತು ತಾಲ್ಲೂಕುಗಳ ಪುನರ್ವಿಂಗಡಣಾ ಸಮಿತಿಗಳು ಸಲ್ಲಿಸಿದ ವರದಿಗಳು ಸರ್ಕಾರದ ಪರಿಶೀಲನೆಯಲ್ಲಿದ್ದು, ಶೀಘ್ರವಾಗಿ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು.

ರಾಜ್ಯದಲ್ಲಿ ಉಂಟಾಗಿರುವ ಅಭಾವ ಹಾಗೂ ಪ್ರವಾಹ ನಿಯಂತ್ರಣ

೧೫೦. ಶ್ರೀ ಕೆ. ಹೆಚ್. ಪಾಟೀಲ್ (ಗದಗ).—ಮಾನ್ಯ ಕಂದಾಯ ಹಾಗೂ ಯೋಜನಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಕೇಂದ್ರ ಸರ್ಕಾರದಿಂದ ರಾಜ್ಯದಲ್ಲಿ ಉಂಟಾಗಿರುವ ಅಭಾವ ಹಾಗೂ ಪ್ರವಾಹ ನಿಯಂತ್ರಣಕ್ಕೆ ಪರಿಹಾರಾರ್ಥವಾಗಿ ನೀಡಿರುವ ಸಹಾಯದ ದುರುಪಯೋಗ ಮತ್ತು ಸಹಾಯವನ್ನು ಉಪಯೋಗಿಸಿಕೊಳ್ಳದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ?

ಆ) ಹಾಗಿದ್ದಲ್ಲಿ, ದುರುಪಯೋಗ ಮತ್ತು ಉಪಯೋಗಿಸಿಕೊಳ್ಳದೇ ಇರುವ ಸಹಾಯದ ಮೊತ್ತವೆಷ್ಟು ಮತ್ತು ಅದಕ್ಕೆ ಕಾರಣಗಳೇನು ?

ಶ್ರೀ ಎಸ್.ಆರ್. ಬೊಮ್ಮಾಯಿ (ಕಂದಾಯ ಹಾಗೂ ಯೋಜನಾ ಮಂತ್ರಿಗಳು).—

ಅ) ಇಲ್ಲ.

ಆ) ಪ್ರಶ್ನೆ (ಅ) ಗೆ ನೀಡಿರುವ ಉತ್ತರದಿಂದ, ಈ ಪ್ರಶ್ನೆ ಉದ್ಭವಿಸುವುದಿಲ್ಲ.

ನೂಲು ಖರೀದಿಸುವ ಕುರಿತು

೧೫೨. ಶ್ರೀ ಕೆ ಹೆಚ್. ಪಾಟೀಲ್ (ಗದಗ).—ಮಾನ್ಯ ಸಣ್ಣ ಪ್ರಮಾಣದ ಕೈಗಾರಿಕಾ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಸಹಕಾರಿ ಹಾಗೂ ಖಾಸಗಿ ನೂಲಿನ ಕಾರ್ಖಾನೆಗಳಿಗೆ ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮವು ೧೯೮೭-೮೮ರಲ್ಲಿ ವೆಚ್ಚ ಮಾಡಿದ ಒಟ್ಟು ಮೊಬಲಗು ಎಷ್ಟು,

ಆ) ಕರ್ನಾಟಕದ ಕೈಮಗ್ಗ ಅಭಿವೃದ್ಧಿ ನಿಗಮವು ಈ ಕಾರ್ಖಾನೆಗಳಿಗೆ ಹಣ ಪಾವತಿ ಮಾಡದೇ ಇರುವುದು ನಿಜವೇ ;

ಇ) ಹಾಗಿದ್ದ ಪಕ್ಷದಲ್ಲಿ ಹಣಪಾವತಿ ಮಾಡದೇ ಇರಲು ಕಾರಣವೇನು ?

ಶ್ರೀ ಬಿ.ಎ. ಜೀವಿಜಯ (ಸಣ್ಣ ಪ್ರಮಾಣದ ಕೈಗಾರಿಕಾ ಸಚಿವರು).—

ಅ) ರೂ. ೩೫೫.೭೯ ಲಕ್ಷಗಳು.

ಆ) ೨೮೮.೯೮ ಲಕ್ಷ ರೂ.ಗಳನ್ನು ಈಗಾಗಲೇ ಪಾವತಿ ಮಾಡಲಾಗಿದೆ.

ಇ) ಕರ್ನಾಟಕ ಕೈಮಗ್ಗ ಅಭಿವೃದ್ಧಿ ನಿಗಮಕ್ಕೆ ಅನೇಕ ಕಡೆಗಳಿಂದ ಸಲ್ಲಬೇಕಾದ ಹಣ ಬಾರದೇ ಇರುವುದು.